RNU AIR DHARWAD

MAY 13, 2026

# AKASHAVANI - DHARWAD
# PRADESH SAMACHARA (KANNADA) 12.00 P.M.

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

<><><>

**ರಾಜ್ಯದಲ್ಲಿ ಭೂ ಸ್ವಾಧೀನ ಪ್ರಕ್ರಿಯೆಯನ್ನು** ವೇಗಗೊಳಿಸಿ, ಕೈಗಾರಿಕೆ ಹೂಡಿಕೆದಾರರಿಗೆ ಅನುಕೂಲಕರ ವಾತಾವರಣ ಸೃಷ್ಟಿಸುವ ನಿಟ್ಟಿನಲ್ಲಿ ಅಧಿಕಾರಿಗಳಿಗೆ ಅಗತ್ಯ ಸೂಚನೆ ನೀಡಲಾಗಿದೆ ಎಂದು ವಾಣಿಜ್ಯ ಮತ್ತು ಕೈಗಾರಿಕೆಗಳ ಖಾತೆ ಸಚಿವ ಎಂ.ಬಿ ಪಾಟೀಲ್ ತಿಳಿಸಿದ್ದಾರೆ. ಕರ್ನಾಟಕ ರಾಜ್ಯ ಕೈಗಾರಿಕೆ ಮೂಲಸೌಕರ್ಯ ಅಭಿವೃದ್ಧಿ ಮಂಡಳಿ ಹಾಗೂ ಕರ್ನಾಟಕ ಕೈಗಾರಿಕೆ ಪ್ರದೇಶ ಅಭಿವೃದ್ಧಿ ಮಂಡಳಿ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಸಚಿವರು, ಚಾಲ್ತಿಯಲ್ಲಿರುವ ಯೋಜನೆಗಳು ಹಾಗೂ ಭವಿಷ್ಯದಲ್ಲಿ ಕೈಗೊಳ್ಳಬೇಕಿರುವ ಅಭಿವೃದ್ಧಿ ಯೋಜನೆಗಳ ಕುರಿತು ಮಹತ್ವದ ಮಾತುಕತೆ ನಡೆಸಲಾಗಿದೆ ಎಂದು ತಿಳಿಸಿದ್ದಾರೆ.

<><><>

**ಕರ್ನಾಟಕ ರಾಜ್ಯ ಸರ್ಕಾರ ಕೊಡಮಾಡುವ** ಪ್ರಗತಿಪರ ರೈತ ಮಹಿಳೆ ಪ್ರಶಸ್ತಿಗೆ ವಿಜಯನಗರ ಜಿಲ್ಲೆ, ಹೊಸಪೇಟೆ ತಾಲೂಕಿನ ಕಡ್ಡಿರಾಂಪುರ ಗ್ರಾಮದ ಗೌರಮ್ಮ ಸಿದ್ದಲಿಂಗಯ್ಯ ಸೇರಿದಂತೆ, ರಾಜ್ಯದ ವಿವಿಧ ಜಿಲ್ಲೆಗಳ ಒಟ್ಟು 8 ಜನ ಮಹಿಳೆಯರು ಭಾಜನರಾಗಿದ್ದಾರೆ. ಕಲಬುರಗಿಯಲ್ಲಿ ಆಯೋಜಿತ ಸಮಾರಂಭದಲ್ಲಿ, ಪ್ರಶಸ್ತಿಗಳನ್ನು ಪ್ರದಾನಿಸಿ ಗೌರವಿಸಲಾಯಿತು. ಕಡ್ಡಿರಾಂಪುರ ಗ್ರಾಮದಲ್ಲಿ ಸಾವಯವ ಕೃಷಿ ಕೈಗೊಂಡು, ವಿವಿಧ ಬೆಳೆಗಳನ್ನು ಬೆಳೆಯುತ್ತಿರುವ ಗೌರಮ್ಮ, ಪ್ರದೇಶ ಸಮಾಚಾರಕ್ಕಾಗಿ ತಮ್ಮ ಸಂತಸ ಹಂಚಿಕೊಂಡಿದ್ದಾರೆ.

<><><>

**ಧ್ವನಿ: ಗೌರಮ್ಮ ಧ್ವನಿ- 27 ಸೆಕೆಂದುಗಳು**

<><><>

**ಕೊಪ್ಪಳ ತೋಟಗಾರಿಕೆ ಇಲಾಖೆ ವತಿಯಿಂದ**, ನಗರದ ತೋಟಗಾರಿಕೆ ಜಂಟಿ ನಿರ್ದೇಶಕರ ಕಚೇರಿ ಆವರಣದಲ್ಲಿ, 10 ನೇ ವರ್ಷದ ಮಾವು ಮೇಳಕ್ಕೆ ಚಾಲನೆ ದೊರೆತಿದೆ. 22 ರ ವರೆಗೆ ಜರುಗುವ, ಹತ್ತು ದಿನಗಳ ಮಾವು ಮೇಳದಲ್ಲಿ ಕೇಸರ್, ದಶಹರಿ, ತೋತಾಪುರಿ, ಮಲ್ಲಿಕಾ, ಬೆನೆಶಾನ್, ಸಿಂಧೂರಿ, ಇಮಾಮ್ ಪಸಂದ್ ಸೇರಿದಂತೆ ವಿವಿಧ ತಳಿ ಮಾವುಗಳ ಪ್ರದರ್ಶನ ಹಾಗೂ ಮಾರಾಟ ನಡೆಯಲಿದೆ. 100 ಕ್ಕೂ ಹೆಚ್ಚಿನ ಸಂಖ್ಯೆಯ ಮಾವು ಬೆಳೆಗಾರರು ಮಾವು ಮೇಳದಲ್ಲಿ ಪಾಲ್ಗೊಂಡಿದ್ದಾರೆ. 10 ನೇ ವರ್ಷದ ಮಾವು ಮೇಳದ ಅಂಗವಾಗಿ ಆಯೋಜಿತ, ಛಾಯಾಚಿತ್ರ ಪ್ರದರ್ಶನವನ್ನು ವೀಕ್ಷಿಸಿದ, ವಿಧಾನಪರಿಷತ್ ಸದಸ್ಯರಾದ ಹೇಮಲತಾ ನಾಯಕ್ ಮೆಚ್ಚುಗೆ ವ್ಯಕ್ತಪಡಿಸಿದರು.

<><><>

**ಬಾಗಲಕೋಟೆ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ,** ವಿವಿಧ ಸಂಸ್ಥೆಗಳ ಸಹಯೋಗದಲ್ಲಿ, ಇದೇ 16, 17 ಹಾಗೂ 18 ರಂದು ಮೂರು ದಿನಗಳ ಕಾಲ ಮಾವು ಮೇಳ–2026 ಆಯೋಜಿಸಿದೆ.

<><><>

**ಚಾಮರಾಜನಗರ ಜಿಲ್ಲೆ,** ಹನೂರು ತಾಲೂಕು, ಮಲೆ ಮಹದೇಶ್ವರ ಬೆಟ್ಟ ಹಾಗೂ ನಾಗಮಲೆಗೆ ಪಾದಯಾತ್ರೆ ಮೂಲಕ ತೆರಳಲು ಜಾತ್ರಾ ಅವಧಿಯಲ್ಲಿ ಮಾತ್ರ ಅವಕಾಶ ನೀಡಲಾಗುವುದು ಎಂದು ಅರಣ್ಯ ಖಾತೆ ಸಚಿವ ಈಶ್ವರ ಖಂಡ್ರೆ ತಿಳಿಸಿದ್ದಾರೆ. ನಾಗಮಲೆಗೆ ತೆರಳುತ್ತಿದ್ದ ಬಾಲಕ, ಚಿರತೆ ದಾಳಿಯಿಂದ ಮೃತಪಟ್ಟ ಹಿನ್ನೆಲೆ, ಕಾವೇರಿ ಹಾಗೂ ಮಲೆ ಮಹದೇಶ್ವರ ವನ್ಯಜೀವಿಧಾಮದ ಅಧಿಕಾರಿಗಳೊಂದಿಗೆ ವರ್ಚುವಲ್ ಮೂಲಕ ಸಭೆ ನಡೆಸಿದ ಸಚಿವರು, ಮಹದೇಶ್ವರ ಬೆಟ್ಟಕ್ಕೆ ಶಿವರಾತ್ರಿ, ಯುಗಾದಿ ಜಾತ್ರೆ ವೇಳೆ ಮಾತ್ರವೇ ಕಾಲ್ನಡಿಗೆಯಲ್ಲಿ ಸಾಗಲು ಅವಕಾಶ ನೀಡುವಂತೆ ನಿರ್ದೇಶಿಸಿದರು.

<><><>

**ವಿಶ್ವ ಪ್ರಸಿದ್ಧ ಹಂಪಿಯಲ್ಲಿ ಅನಧಿಕೃತವಾಗಿ** ಕಾರ್ಯಾಚರಿಸುತ್ತಿರುವ ಹೋಂ ಸ್ಟೇ, ವಸತಿಗೃಹ ಹಾಗೂ ಗೆಸ್ಟ್ ಹೌಸ್ ಗಳ ಮೇಲೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಸ್. ಜಾನ್ಹವಿ ನೇತೃತ್ವದ ತಂಡ ದಾಳಿ ನಡೆಸಿ, ಪರಿಶೀಲನೆ ನಡೆಸಿತು. ಕಂದಾಯ, ಪ್ರವಾಸೋದ್ಯಮ ಇಲಾಖೆ ಹಾಗೂ ಹಂಪಿ ಅಭಿವೃದ್ಧಿ ಪ್ರಾಧಿಕಾರದ ಅಧಿಕಾರಿಗಳ ತಂಡ, ಪರವಾನಿಗೆ ಪಡೆಯದೆ ಕಾರ್ಯ ನಿರ್ವಹಿಸುತ್ತಿರುವ ಹೋಂ ಸ್ಟೇಗಳನ್ನು ತಕ್ಷಣ ಬಂದ್ ಮಾಡುವಂತೆ ಸೂಚಿಸಿತು.

<><><>

**ಮುಂದಿನ ಐದು ದಿನಗಳ** ವರೆಗೆ, ಉತ್ತರ ಒಳನಾಡು ಜಿಲ್ಲೆಗಳಲ್ಲಿ ತಾಪಮಾನ ಏರಿಕೆ ಆಗುವ ಸಾಧ್ಯತೆ ಇದ್ದು, ನಾಗರಿಕರು ಮುಂಜಾಗ್ರತೆ ಕ್ರಮಗಳನ್ನು ಪಾಲಿಸಿ, ಸುರಕ್ಷಿತರಾಗಿರುವಂತೆ ಹವಾಮಾನ ಇಲಾಖೆ ಮುನ್ನೆಚ್ಚರಿಕೆ ನೀಡಿದೆ.

<><><>

**ಉತ್ತರ ಕನ್ನಡ ಜಿಲ್ಲೆಯಲ್ಲಿ ಕುಡಿಯುವ** ನೀರಿನ ಅಭಾವ ಮರುಕಳಿಸುವ ಗ್ರಾಮಗಳನ್ನು ಗುರುತಿಸಿ, ಸಮರ್ಪಕವಾಗಿ ಕುಡಿಯುವ ನೀರು ಪೂರೈಕೆ ಮಾಡಲು ಕ್ರಮವಹಿಸುವಂತೆ ಉತ್ತರಕನ್ನಡ ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ಸೂಚಿಸಿದ್ದಾರೆ.

<><><>

**ಗದಗ ಜಿಲ್ಲೆಯಲ್ಲಿ, ತಾಪಮಾನ ಏರಿಕೆ ಹಿನ್ನೆಲೆ,** ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ಎಚ್ಚರ ವಹಿಸಬೇಕು, ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು ತಮ್ಮ ವ್ಯಾಪ್ತಿಯ ಗ್ರಾಮಗಳಲ್ಲಿ ಸಮರ್ಪಕ ಕುಡಿಯುವ ನೀರಿನ ಪೂರೈಕೆಯಾಗುತ್ತಿರುವ ಬಗ್ಗೆ ಖಚಿತಪಡಿಸಿಕೊಳ್ಳಬೇಕು ಎಂದು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಡಾಕ್ಟರ ಎಂ.ವಿ ವೆಂಕಟೇಶ ನಿರ್ದೇಶನ ನೀಡಿದ್ದಾರೆ.

<><><>

**ಬೆಂಗಳೂರು ಕೃಷಿ ವಿಶ್ವವಿದ್ಯಾಲಯದ,** 60 ನೇ ಘಟಿಕೋತ್ಸವ ನಾಳೆ ಬೆಳಗ್ಗೆ 11.30 ಕ್ಕೆ, ಜಿಕೆವಿಕೆ ಆವರಣದಲ್ಲಿರುವ, ಡಾಕ್ಟರ ಬಾಬು ರಾಜೇಂದ್ರ ಪ್ರಸಾದ್ ಅಂತಾರಾಷ್ಟ್ರೀಯ ಸಮಾವೇಶ ಭವನದಲ್ಲಿ ಜರುಗಲಿದೆ.

<><><>

**ಇಂದು ಹಿರಿಯ ಸಾಹಿತಿ, ಪದ್ಮವಿಭೂಷಣ ಆರ್.ಕೆ ನಾರಾಯಣ್** ಅವರ ಪುಣ್ಯತಿಥಿ.  ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ತಮ್ಮ ಎಕ್ಸ್ ಖಾತೆಯ ಮೂಲಕ, ಆರ್.ಕೆ ನಾರಾಯಣ್ ಅವರ ಸಾಹಿತಿಕ ಕೊಡುಗೆಗಳನ್ನು ಸ್ಮರಿಸಿದ್ದು, ಗೌರವ ನಮನಗಳನ್ನು ಸಲ್ಲಿಸಿದ್ದಾರೆ.

<><><>

**ಕೇಂದ್ರ ಸರ್ಕಾರದ ಬೆಂಬಲ ಬೆಲೆ** ಯೋಜನೆಯಡಿ, ಬಾಗಲಕೋಟೆ ಜಿಲ್ಲೆಯ ರೈತರಿಂದ ಎಫ್.ಎ.ಕ್ಯೂ ಗುಣಮಟ್ಟದ ಸೂರ್ಯಕಾಂತಿ ಖರೀದಿ ಪ್ರಕ್ರಿಯೆ ಆರಂಭಿಸಲಾಗಿದ್ದು, ಪ್ರತಿ ಕ್ವಿಂಟಲ್ ಗೆ 7 ಸಾವಿರದ 721 ರೂಪಾಯಿ ದರ ನಿಗದಿಪಡಿಸಲಾಗಿದೆ ಎಂದು ಜಿಲ್ಲಾಧಿಕಾರಿ ಸಂಗಪ್ಪ ತಿಳಿಸಿದ್ದಾರೆ.

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

<><><>

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ**

<><><>